**Akashvani : Bangalore**
**Regional Bulletin In Kannada**
**25.09.2024 / 14.30 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.09.2024** **14.30 hrs**

*****************

ಮುಖ್ಯಾಂಶಗಳು

1. ಜ್ಞಾನ ಆರೋಗ್ಯ ಸಂಶೋಧನೆಯ- ಕ್ವಿನ್ ಸಿಟಿ ಯೋಜನೆಗೆ ಸರ್ಕಾರ ಚಾಲನೆ
2. ಶಿವಮೊಗ್ಗ- ಶಿಕಾರಿಪುರ ಉದ್ದೇಶಿತ ನೂತನ ರೈಲು ಮಾರ್ಗದ ಪರಿಶೀಲನೆ ನಡೆಸಿದ ಸಚಿವ ವಿ.ಸೋಮಣ್ಣ
3. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ವಿಧಾನಸೌಧದ ಮುಂಭಾಗದಲ್ಲಿ ಬಿಜೆಪಿ ಪ್ರತಿಭಟನೆ
4. ಮುಡಾ ಪ್ರಕರಣದಲ್ಲಿ ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವುದಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ
5. ರಾಜ್ಯದ ವಿವಿಧೆಡೆ ಸ್ವಚ್ಛತಾ ಹಿ ಸೇವಾ ಅಭಿಯಾನ ಮೂಲಕ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುತ್ತಿರುವ ಜಿಲ್ಲಾಡಳಿತ

*************

ಬೆಂಗಳೂರಿನಲ್ಲಿ ನಡೆದ ಜ್ಞಾನ, ಆರೋಗ್ಯ ಮತ್ತು ಸಂಶೋಧನೆಯನ್ನು ಸಮಗ್ರವಾಗಿ ಸಂಯೋಜಿಸುವ ರಾಜ್ಯದ ಅರ್ಥ ವ್ಯವಸ್ಥೆ ಹಾಗೂ ಕರ್ನಾಟಕದ ಹೆಗ್ಗರುತನ್ನು ಬದಲಿಸುವ ಕ್ವಿನ್ ಸಿಟಿ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವಿಧಾನಸೌಧದಲ್ಲಿ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು ಈ ಯೋಜನೆಯಿಂದ ರಾಜ್ಯದ ಆರ್ಥಿಕ ಬೆಳವಣಿಗೆ ಹೆಚ್ಚಾಗಲಿದ್ದು, ಜಾಗತಿಕ ಪ್ರತಿಭಾನ್ವಿತರನ್ನು ಆಕರ್ಷಿಸಲಿದೆ ಎಂದು ತಿಳಿಸಿದರು.

ಕೇವಲ ಕಟ್ಟಡಗಳನ್ನು ನಿರ್ಮಾಣ ಮಾಡುವುದು ಕ್ವಿನ್ ಸಿಟಿಯ ಗುರಿಯಲ್ಲ. ಶಿಕ್ಷಣ, ತಂತ್ರಜ್ಞಾನ, ಉದ್ಯೋಗ, ಸುಸ್ಥಿರ ಅಭಿವೃದ್ಧಿ ಸೇರಿದಂತೆ ಕರ್ನಾಟಕದ ಭವಿಷ್ಯವನ್ನು ಗುರಿಯಾಗಿಟ್ಟುಕೊಂಡು ಜನರ ಜೀವನದಲ್ಲಿ ಬದಲಾವಣೆ ತರುವುದು ಯೋಜನೆಯ ಗುರಿ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಬೆಂಗಳೂರು ನಗರದ ಅಭಿವೃದ್ಧಿಗೆ ಸರ್ಕಾರ ಕಟಿಬದ್ಧವಾಗಿದ್ದು ನೀರು ವಿದ್ಯುತ್ ರಸ್ತೆ ಸೇರಿದಂತೆ ಎಲ್ಲಾ ಮೂಲ ಸೌಕರ್ಯವನ್ನು ಜನರಿಗೆ ಹಾಗೂ ಕೈಗಾರಿಕೆಗಳಿಗೆ ಒದಗಿಸುವುದು ಆದ್ಯತೆ" ಎಂದು ತಿಳಿಸಿದರು.

ಕೆಲವೇ ದಿನಗಳಲ್ಲಿ ಕಾವೇರಿ ಕುಡಿಯುವ ನೀರಿನ ಐದನೇ ಹಂತ ಕಾಮಗಾರಿ ಮುಗಿಯಲಿದ್ದು ಮುಂದಿನ ೧೦ ವರ್ಷ ಬೆಂಗಳೂರು ಹಾಗೂ ನಗರದ ಸುತ್ತಮುತ್ತ ನೀರಿನ ತೊಂದರೆ ಇರುವುದಿಲ್ಲ" ಎಂದು ತಿಳಿಸಿದರು.

*************

ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು ಇಂದು ಶಿವಮೊಗ್ಗ ಜಿಲ್ಲೆಯ ಶಿಕಾರಿಪುರಕ್ಕೆ ಭೇಟಿ ನೀಡಿ ಶಿವಮೊಗ್ಗ-ಶಿಕಾರಿಪುರ ಉದ್ದೇಶಿತ ನೂತನ ಮಾರ್ಗದ ಪರಿಶೀಲನೆ ನಡೆಸಿದರು.

ಕೋಟೆಗಂಗೂರಿನಲ್ಲಿ ನಿರ್ಮಿಸಲಾಗುತ್ತಿರುವ ರೈಲುಗಳನ್ನು ಸ್ವಚ್ಛಗೊಳಿಸುವ ಕೋಚಿಂಗ್ ಟರ್ಮಿನಲ್‌ಗೆ ಭೇಟಿ ನೀಡಿ ಮಾತನಾಡಿದ ಅವರು

ಈ ರೈಲ್ವೇ ಕೋಚಿಂಗ್ ಟರ್ಮಿನಲ್ ರಾಜ್ಯದಲ್ಲೇ ಮೊದಲನೆಯದಾಗಿದ್ದು, ೨೦೨೬ ರೊಳಗೆ ಗುಣಮಟ್ಟದೊಂದಿಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚಿಸಲಾಗಿದೆ ಎಂದು ಅವರು ತಿಳಿಸಿದರು.

ಇಲ್ಲಿ ಟರ್ಮಿನಲ್ ನಿರ್ಮಾಣದಿಂದ ರಾಜ್ಯ ಎಲ್ಲ ರೈಲುಗಳು ಸ್ವಚ್ಛತೆಗಾಗಿ ಇಲ್ಲಿಗೆ ಬರಲಿವೆ. ಇಲ್ಲಿ ರೈಲ್ವೆ ಡಿಪೋ ನಿರ್ಮಾಣವಾಗುವುದರಿಂದ ವಂದೇ ಭಾರತ್ ರೈಲು ಸಹ ಬರಲಿದೆ. ಟರ್ಮಿನಲ್ ನಿರ್ಮಾಣದಿಂದ ಸ್ಥಳೀಯವಾಗಿ ಉದ್ಯೋಗಾವಕಾಶಗಳು ಹೆಚ್ಚಲಿವೆ. ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಲು ಮತ್ತು ಗುಣಮಟ್ಟವನ್ನು ಪರಿಶೀಲಿಸಲು ರೈಲ್ವೇ ಮುಖ್ಯ ಅಭಿಯಂತರರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದ್ದು, ಎಲ್ಲರೂ ಕಾಮಗಾರಿ ಶೀಘ್ರದಲ್ಲಿ ಪೂರ್ಣಗೊಳ್ಳಲು ಸಹಕರಿಸಬೇಕೆಂದು ಸೂಚಿಸಿದರು.

*************

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಬೆಂಗಳೂರಿಗೆ ಇಂದು ಭೇಟಿ ನೀಡಲಿದ್ದಾರೆ. ನಗರದಲ್ಲಿ ನಡೆಯಲಿರುವ ಭಾರತೀಯ ರಸ್ತೆ ಕಾಂಗ್ರೆಸ್‌ನ ಸೇತುವೆ ನಿರ್ವಹಣೆಯಲ್ಲಿ ಆಧುನಿಕತೆ ಕುರಿತಂತೆ ಅಂತಾರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ನಂತರ ಅವರು, ಬೆಂಗಳೂರು ಸುತ್ತಮುತ್ತ ವಲಯದಲ್ಲಿ ಕೈಗೊಂಡಿರುವ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಯೋಜನೆಗಳ ಕುರಿತು ಪರಾಮರ್ಶೆ ನಡೆಸಲಿದ್ದಾರೆ. ಈ ಮಧ್ಯೆ, ಕೇಂದ್ರ ಸಂಪರ್ಕ ಮತ್ತು ಈಶಾನ್ಯ ರಾಜ್ಯಗಳ ಅಭಿವೃದ್ಧಿ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಕೂಡ ಬೆಂಗಳೂರಿಗೆ ಇಂದು ಭೇಟಿ ನೀಡಲಿದ್ದಾರೆ. ಬೆಂಗಳೂರಿನ ಸಿ-ಡಾಟ್ ಕಚೇರಿಗೆ ಭೇಟಿ ನೀಡಲಿರುವ ಅವರು, ದೇಶೀಯ ಹೊಸ ತಂತ್ರಜ್ಞಾನ ಕಂಪನಿಗಳ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

*************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ  ಬಾಲ್ಯ ವಿವಾಹ ನಿಷೇಧ ಕಾಯ್ದೆ-೨೦೦೬ರಡಿ ಒಟ್ಟು-೧೬ ಪ್ರಕರಣಗಳು ದಾಖಲಾಗಿದೆ. ಈ ಪೈಕಿ ದೇವನಹಳ್ಳಿಯಲ್ಲಿ ೬, ದೊಡ್ಡಬಳ್ಳಾಪುರ ೯, ಹೊಸಕೋಟೆಯಲ್ಲಿ ೧ ಬಾಲ್ಯವಿವಾಹ ಪ್ರಕರಣಗಳನ್ನು ತಡೆಯಲಾಗಿದೆ.

ಜಿಲ್ಲೆಯ ಪ್ರತಿ ಮನೆಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಕಾನೂನುಗಳ ಕರಪತ್ರವನ್ನು ಹಂಚುವ ಮೂಲಕ ಬಾಲ್ಯ ವಿವಾಹ ನಿಷೇಧ ಕುರಿತಂತೆ ಪೋಷಕರಲ್ಲಿ ಜಾಗೃತಿ ಮೂಡಿಸಬೇಕು. ಬಾಲ್ಯ ವಿವಾಹ ನಿಷೇಧ ಕಾಯ್ದೆ ಅನುಷ್ಠಾನದ ಭಾಗವಾಗಿರುವ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಬಾಲ್ಯ ವಿವಾಹ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇದೇ ವೇಳೆ ಅಪೌಷ್ಟಿಕತೆಯಿಂದ ಬಳಲುತ್ತಿರುವ ಗರ್ಭಿಣಿ, ಬಾಣಂತಿಯರು ಹಾಗೂ ಮಕ್ಕಳಿಗೆ ಪೋಷಣ್ ಅಭಿಯಾನದಡಿ ಪೌಷ್ಠಿಕ ಆಹಾರ ನೀಡಿ ಅವರನ್ನು ಸದೃಢರನ್ನಾಗಿಸಬೇಕು ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ, ಪೋಷಣ್ ಅಭಿಯಾನ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಜಿಲ್ಲೆಯನ್ನು ಅಪೌಷ್ಟಿಕ ಮುಕ್ತ ಜಿಲ್ಲೆಯನ್ನಾಗಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

*************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಘನತೆ ಉಳಿಸಿಕೊಳ್ಳಬೇಕಾದರೆ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಯಿ ಒತ್ತಾಯಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ನ್ಯಾಯಾಲಯದಲ್ಲಿ ಹೋರಾಟ ನಡೆಸುವ ಜೊತೆಗೆ ಅವರ ಮೇಲಿನ ಸಾರ್ವಜನಿಕ ನಂಬಿಕೆಯನ್ನು ಉಳಿಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಆಗ್ರಹಿಸಿ ಬಿಜೆಪಿ ಬೆಂಗಳೂರಿನಲ್ಲಿಂದು ಪ್ರತಿಭಟನೆ ನಡೆಸಿತು. ಹಗರಣದಲ್ಲಿ ಮುಖ್ಯಮಂತ್ರಿ ವಿರುದ್ಧ ಲೋಕಾಯುಕ್ತ ತನಿಖೆಗೆ ಹೈಕೋರ್ಟ್ ಆದೇಶಿಸಿರುವ ಹಿನ್ನೆಲೆಯಲ್ಲಿ ವಿಧಾನಸೌಧದ ಎದುರು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಈ ವೇಳೆ ಪ್ರತಿಪಕ್ಷದ ನಾಯಕರಾದ ಆರ್. ಅಶೋಕ, ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಿರಿಯ ಮುಖಂಡರು, ನೈತಿಕ ಹೊಣೆಹೊತ್ತು ಮುಖ್ಯಮಂತ್ರಿ ರಾಜೀನಾಮೆ ನೀಡಿ ತನಿಖೆ ಎದುರಿಸಬೇಕೆಂದು ಆಗ್ರಹಿಸಿದರು.

*************

ಮೂಡಾ ಪ್ರಕರಣದಲ್ಲಿ ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜೀನಾಮೆ ನೀಡುವ ಅವಶಕ್ಯತೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಮಾತನಾಡಿದ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವುದಿಲ್ಲ ಎಂದು ತಿಳಿಸಿದ್ದಾರೆ.

*************

ಕಸವನ್ನು ಎಲ್ಲೆಂದರಲ್ಲಿ ಎಸೆದು ಪರಿಸರವನ್ನು ಮಲಿನಗೊಳಿಸುವವರಿಗೆ ದಂಡ ವಿಧಿಸುವ ಅವಕಾಶಗಳಿದ್ದು, ಇದನ್ನು ಎಲ್ಲಾ ಸ್ಥಳೀಯ ಸಂಸ್ಥೆಗಳು ಬಳಸಿಕೊಳ್ಳುವಂತೆ ಉತ್ತರಕನ್ನಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಡಿ.ಎಸ್.ವಿಜಯ ಕುಮಾರ್ ತಿಳಿಸಿದ್ದಾರೆ.

ಕಾರವಾರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ, ಸ್ವಚ್ಛತಾ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು. ಗಾಂಧೀಜಿ ನೀಡಿದ ಮಾರ್ಗದರ್ಶನದಂತೆ ನಾವೆಲ್ಲರೂ ನಡೆಯಬೇಕಿದೆ ಎಂದು ಹೇಳಿದರು.

ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಸ್ವಚ್ಛತಾ ಹಿ ಸೇವಾ ಅಭಿಯಾನ ನಡೆಯುತ್ತಿದ್ದು, ಜಿಲ್ಲಾಡಳಿತ ಮತ್ತು ನಗರಸಭೆ ಸಹಯೋಗದಲ್ಲಿ ಚಿಕ್ಕಬಳ್ಳಾಪುರ ನಗರದ ಬಸಪ್ಪ ಛತ್ರದ ಕಲ್ಯಾಣಿಯನ್ನು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ನೇತೃತ್ವದಲ್ಲಿ ಸ್ವಚ್ಛಗೊಳಿಸಲಾಯಿತು.

ಹಾಸನದಲ್ಲಿ ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮದ ಅಂಗವಾಗಿ ಚನ್ನಪಟ್ಟಣ ಬಳಿ ಇರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ ನಡೆಯಿತು.

ಹಿರಿಯ ಸಿವಿಲ್ ನ್ಯಾಯಾಧೀಶರಾದ, ದ್ರಾಕ್ಷಾಯಿಣಿ  ಬಸ್ ನಿಲ್ದಾಣದ ಆವರಣವನ್ನು  ಸ್ವಚ್ಛಗೊಳಿಸುವ ಮೂಲಕ ಅಭಿಯಾನದಲ್ಲಿ ಪಾಲ್ಗೊಂಡರು.

ಕೋಲಾರದಲ್ಲಿ ನಡೆದ ಸ್ವಚ್ಛತಾ ಹಿ ಸೇವಾ ಅಭಿಯಾನದಲ್ಲಿ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಏಡುಕೊಂಡಲು ಪಾಲ್ಗೊಂಡು ಸ್ವಚ್ಛತಾ ಕಾರ್ಯ ನೇರವೇರಿಸಿದರು. ಸ್ವಚ್ಛತೆ ಕೊರತೆ ಹಾಗೂ ವಾಯುಮಾಲಿನ್ಯದಿಂದ ಪ್ರತಿಯೊಬ್ಬರ ಆರೋಗ್ಯ ಹದಗೆಡುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

*************

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ  ನೇತೃತ್ವದಲ್ಲಿ ಮೈಸೂರು ಜಿಲ್ಲಾಧಿಕಾರಿ ಹಾಗೂ ಇತರೆ ಅಧಿಕಾರಿಗಳು ಕಾವೇರಿ ನಿವಾಸದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನಾಡ ಹಬ್ಬ ದಸರಾಗೆ ಆಹ್ವಾನಿಸಿದರು..

ಇದೇ ವೇಳೆ  ಮೈಸೂರು ಜಿಲ್ಲಾಡಳಿತ ವತಿಯಿಂದ ಹಿರಿಯ ಸಾಹಿತಿ ಪ್ರೊ. ಹಂಪ ನಾಗರಾಜಯ್ಯ ಅವರನ್ನು ಮೈಸೂರು ದಸರಾ ಮಹೋತ್ಸವ ಉದ್ಘಾಟನೆಗೆ ಆಹ್ವಾನಿಸಲಾಯಿತು. ಹಂಪನಾ ಅವರ ಬೆಂಗಳೂರಿನ ನಿವಾಸಕ್ಕೆ ಆಗಮಿಸಿ ಮೈಸೂರು ಪೇಟ ತೊಡಿಸಿ, ಫಲಪುಷ್ಪದೊಂದಿಗೆ ಜಿಲ್ಲಾಧಿಕಾರಿ ಆಮಂತ್ರಣ ನೀಡಿದರು.

*************

ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಜಂಬೂ ಸವಾರಿಯ ಗಜಪಡೆ ಹಾಗೂ ಅಶ್ವರೋಹಿ ಪಡೆಗೆ ಇಂದು ಕುಶಾಲು ತೋಪಿನ ತಾಲಿಮು ನಡೆಸಲಾಯಿತು.

ಅಕ್ಟೋಬರ್ ೧೨ ರಂದು ನಡೆಯಲಿರುವ ಜಂಬೂ ಸವಾರಿಯ ದಿನದಂದು ೨೧ ಬಾರಿ ಕುಶಾಲು ತೋಪು ಹಾರಿಸುವುದರಿಂದ ಅಂದು ಆನೆ ಮತ್ತು ಅಶ್ವರೋಹಿ ಪಡೆಗಳು ಬೆದರದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಇಂದು ಚಿನ್ನದ ಅಂಬಾರಿ ಹೊರುವ ಅಭಿಮನ್ಯು ಸೇರಿದಂತೆ ಒಟ್ಟು ೧೪ ಆನೆಗಳಿಗೆ ಮೂರು ಸುತ್ತಿನ ೨೧ ಕುಶಾಲು ತೋಪಿನ ತಾಲೀಮು ನಡೆಸಲಾಯಿತು.

ವಿಜಯ ದಶಮಿಯಂದು ನಡೆಯಲಿರುವ ಕುಶಾಲು ತೋಪಿನ ಶಬ್ದಕ್ಕೆ ಹೊಂದಿಕೊಳ್ಳಲೆಂದು ಮುನ್ನೆಚ್ಚರಿಕೆಯಾಗಿ ತಾಲಿಮು ನಡೆಸಲಾಗಿದೆ,. ಎಲ್ಲಾ ಆನೆಗಳು ತಾಲಿಮಿಗೆ ಉತ್ತಮವಾಗಿ ಸ್ಪಂದಿಸಿವೆ ಹಾಗೂ ಎಲ್ಲಾ ಆನೆಗಳು ಅರೋಗ್ಯಯುತವಾಗಿವೆ ಎಂದು ಹಿರಿಯ ಅರಣ್ಯಧಿಕಾರಿ ಡಾ ಪ್ರಭುಗೌಡ ತಿಳಿಸಿದ್ದಾರೆ.

*************

ನವೆಂಬರ್ ೧೪ ರಂದು ನಡೆಯಲಿರುವ ಮಕ್ಕಳ ದಿನಾಚರಣೆಯಂದು ಪ್ರಾಣದ ಹಂಗು ತೊರೆದು ಹಾಗೂ ಸಮಯಪ್ರಜ್ಞೆಯಿಂದ ಇತರರ ಪ್ರಾಣ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ ೬ ರಿಂದ ೧೮ ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಶೌರ್ಯ ಪ್ರಶಸ್ತಿಗಾಗಿ ಅರ್ಹ ಮಕ್ಕಳನ್ನು ಹಾಗೂ ಮಕ್ಕಳಿಗಾಗಿ ಸೇವೆ ಸಲ್ಲಿಸಿರುವ ಸಂಸ್ಥೆ, ವ್ಯಕ್ತಿಗಳನ್ನು ಗುರುತಿಸಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅರ್ಜಿಗಳನ್ನು ಆಹ್ವಾನಿಸಿದೆ.

*************

ಯಾವುದೇ ಸ್ವಾರ್ಥವಿಲ್ಲದೇ ಮರಗಳನ್ನೆ ಮಕ್ಕಳೆಂದು ಭಾವಿಸಿ ಮನುಕುಲವನ್ನು ರಕ್ಷಿಸುವ ಬಹುದೊಡ್ಡ ಕೆಲಸವನ್ನು ಸಾಲುಮರದ ತಿಮ್ಮಕ್ಕನವರು ಮಾಡಿದ್ದಾರೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ತಿಳಿಸಿದ್ದಾರೆ.

ಬೆಂಗಳೂರಿನ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ವೃಕ್ಷಮಾತೆ, ಪದ್ಮಶ್ರೀ, ನಾಡೋಜ ಸಾಲುಮರದ ತಿಮ್ಮಕ್ಕ ರವರ ೧೧೩ನೇ ವರ್ಷದ ಜನ್ಮದಿನದ ಸಂಭ್ರಮ ಹಾಗೂ ಸಾಲುಮರದ ತಿಮ್ಮಕ್ಕ 'ನ್ಯಾಷನಲ್ ಗ್ರೀನರಿ ಅವಾರ್ಡ್' ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

*******ಮುಕ್ತಾಯ******